ಕರ್ನಾಟಕ ಸರ್ಕಾರ

ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ ಬೆಂಗಳೂರು – 560 001

ಸಂಖ್ಯೆ:ಎಡಿಎಂ2/ಪ್ರಾಶಾದಾ-69/2009-10 ದಿ:28-04-2010

**ಸುತ್ತೋಲೆ**

ವಿಷಯ: ಪ್ರಾಥಮಿಕ ಶಾಲೆ ಒಂದನೇ ತರಗತಿಗೆ ಮಕ್ಕಳನ್ನು ಸೇರಿಸುವ ಬಗ್ಗೆ ಆದೇಶ

ಉಲ್ಲೇಖ: 1.ಈ ಕಛೇರಿ ಸುತ್ತೋಲೆ ಸಂಖ್ಯೆ:ಅ1[3]ಪ್ರವೇಶ.ಸುತ್ತೋಲೆ.30/1998-99 ದಿನಾಂಕ:-20-06-1998

2. ಈ ಕಛೇರಿ ಸುತ್ತೋಲೆ ಸಂಖ್ಯೆ: ಅ1[3] ಪ್ರವೇಶ/76/99-2000ದಿ:20.6.1993
3. ಕರ್ನಾಟಕ ಶಿಕ್ಷಣ ಅಧಿನಿಯಮ 1983

----000----

ಕಡ್ಡಾಯ ಪ್ರಾಥಮಿಕ ಶಿಕ್ಷಣ ಅಧಿನಿಯಮ 1961ರ ಕಲಂ (7) ಮತ್ತು (12) ರಂತೆ ಪ್ರಾಥಮಿಕ ಶಾಲೆಗೆ ಮಕ್ಕಳನ್ನು ಸೇರಿಸುವುದಕ್ಕೆ 5 ವರ್ಷ 10 ತಿಂಗಳು ಇರಬೇಕಿದೆ. ಕರ್ನಾಟಕ ಶಿಕ್ಷಣ ಅಧಿನಿಯಮ 1983 ರ ನಿಯಮ 11 (1) ರಲ್ಲಿ 5 ವರ್ಷ ತುಂಬಿದ ಯಾವುದೇ ಮಗುವಿಗೆ ಶಾಲೆಗೆ ದಾಖಲು ಮಾಡಿಕೊಳ್ಳಲು ನಿರಾಕರಿಸುವಂತಿಲ್ಲ ಎಂದು ಆದೇಶವಾಗಿದೆ. ಆದರೆ ನಿಯಮವನ್ನು ಉಲ್ಲಂಘಿಸಿ ಅನೇಕ ಶಿಕ್ಷಣ ಸಂಸ್ಥೆಗಳು, ಮುಖ್ಯ ಶಿಕ್ಷಕರು ನಿಯಮಾನುಸಾರ ವಯೋಮಿತಿಯಿಲ್ಲದ ಮಕ್ಕಳಿಗೆ 1ನೇ ತರಗತಿಗೆ ಸೇರಿಸುತ್ತಿರುವುದು ಕಂಡು ಬಂದಿದೆ.

2010-11ನೇ ಶೈಕ್ಷಣಿಕ ವರ್ಷದ ಪ್ರಾರಂಭಕ್ಕೆ ಯಾವುದೇ ಮಗುವನ್ನು ಪ್ರಾಥಮಿಕ ಶಾಲೆಗೆ ಒಂದನೇ ತರಗತಿಗೆ ಸೇರಿಸುವ ಸಂದರ್ಭದಲ್ಲಿ ಆ ಮಗುವಿಗೆ 6 ವರ್ಷವಾಗಿರಬೇಕೆಂಬುದು ಕಡ್ಡಾಯ ಪ್ರಾಥಮಿಕ ಶಿಕ್ಷಣದ ನಿಯಮ, ಅದರಂತೆ ಒಂದನೇ ತರಗತಿಯ ದಾಖಲಾತಿ ಮಾಡಿಕೊಳ್ಳುವುದು. ಶಾಲೆ ಪ್ರಾರಂಬಿಸುವ ದಿನಕ್ಕೆ 5 ವರ್ಷ ತುಂಬಿದ್ದಲ್ಲಿ ಸ್ವಯಂ ಪ್ರೇರಣೆಯಿಂದ ಪೋಷಕರು ತಮ್ಮ ಮಕ್ಕಳನ್ನು 1ನೇ ತರಗತಿಗೆ ದಾಖಲಿಸಬಹುದು. ಅದಕ್ಕಿಂತ ಕಡಿಮೆ ವಯಸ್ಸಿನ ಮಕ್ಕಳನ್ನು ಒಂದನೇ ತರಗತಿಗೆ ದಾಖಲಿಸಿಕೊಂಡಲ್ಲಿ ಸಂಬಂಧಪಟ್ಟ ಮುಖ್ಯ ಶಿಕ್ಷಕರನ್ನೇ ಹೊಣೆಗಾರರನ್ನಾಗಿ ಮಾಡಲಾಗುವುದು. ಆದರೆ ಜನ್ಮ ದಿನಾಂಕದ ಪ್ರಮಾಣ ಪತ್ರ ಇಲ್ಲವೆಂಬ ಕಾರಣದಿಂದ ಯಾವುದೇ ಮಗುವಿಗೆ ದಾಖಲಾತಿಯನ್ನು ನಿರಾಕರಿಸುವಂತಿಲ್ಲ. ಹುಟ್ಟಿದ ದಿನಾಂಕದ ಬಗ್ಗೆ ಅಧಿಕೃತ ದಾಖಲೆ ಇಲ್ಲದಿದ್ದಲ್ಲಿ ಪೋಷಕರಿಂದ ಸ್ವಯಂ ಹೇಳಿಕೆಯನ್ನು ಪಡೆದು ಮಗುವನ್ನು ದಾಖಲಾತಿ ಮಾಡಿಕೊಳ್ಳಲು ತಿಳಿಸಿದೆ.

ಈ ಮೇಲ್ಕಾಣಿಸಿದ ಸೂಚನೆಗಳನ್ನು ಮಕ್ಕಳನ್ನು ದಾಖಲಾತಿ ಮಾಡಿಕೊಳ್ಳುವ ಸಂಧರ್ಭದಲ್ಲಿ ಕಟ್ಟುನಿಟ್ಟಾಗಿ ಪಾಲಿಸಲು ತಿಳಿಸಿದೆ. ಇದರ ಹೊರತುಪಡಿಸಿ ಯಾವುದೇ ಲೋಪದೋಷಗಳು ಕಂಡುಬಂದಲ್ಲಿ ಸಂಬಂಧಪಟ್ಟ ಮುಖ್ಯ ಶಿಕ್ಷಕರನ್ನು ನೇರವಾಗಿ ಜವಾಬ್ದಾರರನ್ನಾಗಿ ಮಾಡಿ ಸೂಕ್ತ ಕ್ರಮ ತೆಗೆದುಕೊಳ್ಳಲಾಗುವುದು.

28/04/10

(ಕೆ.ಆರ್ ಶಶಿಧರ)
ಆಯುಕ್ತರು
ಸಾರ್ವಜನಿಕ ಶಿಕ್ಷಣ ಇಲಾಖೆ

ಇವರಿಗೆ:-

1. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ನಿರ್ದೇಶಕರುಗಳಿಗೆ.
2. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಜಿಲ್ಲಾ ಉಪನಿರ್ದೇಶಕರುಗಳಿಗೆ
3. ರಾಜ್ಯದ ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ತಾಲ್ಲೂಕು ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ.

ಪ್ರತಿಯನ್ನು ವಂದನಾಪೂರ್ವಕವಾಗಿ

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ, ಬಹುಮಹಡಿಗಳ ಕಟ್ಟಡ ಬೆಂಗಳೂರು
2. ರಾಜ್ಯ ಯೋಜನಾ ನಿರ್ದೇಶಕರು, ಸರ್ವ ಶಿಕ್ಷಣ ಅಭಿಯಾನ,ಬೆಂಗಳೂರು
3. ಅಪರ ಆಯುಕ್ತರು ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ ಮತ್ತು ಗುಲ್ಬರ್ಗಾ.3 Adm2\2587 01.doc